ಅಂಗನವಾಡಿ ಕಾರ್ಯಕರ್ತರಿಗೆ ನೀಡುತ್ತಿರುವ ಗೌರವಧನ

5142 (4951); ಶ್ರೀ ಲಕ್ಷ್ಮಣ ಸಂಗಪ್ಪ ಸವದಿ (ಅಥಣಿ)

ಅ) ಅಂಗನವಾಡಿ ಕಾರ್ಯಕರ್ತೆಯರಿಗೆ ನೀಡುತ್ತಿರುವ ಗೌರವಧನ ಎಷ್ಟು;

ಆ) ಬೆಳಗಾವಿ ಜಿಲ್ಲೆ ಅಥಣಿ ತಾಲ್ಲೂಕಿನ ಅಂಗನವಾಡಿ ಕೇಂದ್ರಗಳನ್ನು ಖಾಸಗೀಕರಣ ಮಾಡುವ ಉದ್ದೇಶ ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಹಾಗಿದ್ದಲ್ಲಿ, ಮಿಷನ್ ಮೋಡ್ ಹೆಸರಿನಲ್ಲಿ ಖಾಸಗೀಕರಣ ಮಾಡುವ ಬಗ್ಗೆ ಸರ್ಕಾರದ ಕ್ರಮವೇನು; (ಸಂಪೂರ್ಣ ಮಾಹಿತಿ ನೀಡುವುದು)?

ಶ್ರೀಮತಿ ಉಮಾಶ್ರೀ (ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು)

ಅ) ಅಂಗನವಾಡಿ ಕಾರ್ಯಕರ್ತೆಯರಿಗೆ ಕೇಂದ್ರ ಸರ್ಕಾರದಿಂದ ರೂ. 3000/– ಗಳ ಹಾಗೂ ರಾಜ್ಯ ಸರ್ಕಾರದಿಂದ ರೂ. 3000/– ಗಳ ಹೆಚ್ಚುವರಿ ಗೌರವಧನ ಸೇರಿ ಒಟ್ಟು ರೂ. 6000/– ಗಳನ್ನು ಮಾಹೆಯಾನ ನೀಡಲಾಗುತ್ತಿದೆ.

ಆ) ಇಲ್ಲ

ಇ) ಕೇಂದ್ರ ಸರ್ಕಾರದ ಮಿಷನ್ ಮೋಡ್‌ನ ಮಾರ್ಗಸೂಚಿಗಳಲ್ಲಿ ಶೇಕಡಾ 10 ರಷ್ಟು ಅಂಗನವಾಡಿ ಕೇಂದ್ರಗಳನ್ನು ಸ್ವಯಂ ಸೇವಾ ಸಂಸ್ಥೆಗಳ ಮುಖಾಂತರ ಅನುಷ್ಠಾನಗೊಳಿಸಲು ಸೂಚಿಸಲಾಗಿರುತ್ತದೆ. ಈ ಬಗ್ಗೆ ಎಲ್ಲಾ ರಾಜ್ಯಗಳ ಕಾರ್ಯದರ್ಶಿಗಳ ಮಟ್ಟದ ಸಭೆಯನ್ನು ಕರೆದು ಸಾಧಕ–ಬಾಧಕಗಳ ಬಗ್ಗೆ ಚರ್ಚಿಸಲು ಕೋರಿ ದಿನಾಂಕ: 12–02–2015 ರಂದು ಕೇಂದ್ರ ಸರ್ಕಾರಕ್ಕೆ ಪತ್ರ ಬರೆಯಲಾಗಿದೆ. ಕೇಂದ್ರ ಸರ್ಕಾರದಿಂದ ಯಾವುದೇ ಮಾರ್ಗದರ್ಶನ ಬರುವವರೆಗೆ ಯಾವುದೇ ಮುಂದಿನ ಕ್ರಮ ಕೈಗೊಳ್ಳಲಾಗುವುದಿಲ್ಲ.